# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23ನೇ ಸಾಲಿನ ಮೀನುಗಾರಿಕೆ ಇಲಾಖೆಯ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ವೇತನೇತರ ಲೆಕ್ಕ ಶೀರ್ಷಿಕೆಗಳಡಿ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-
1) ಆದೇಶ ಸಂಖ್ಯೆ: ಪಸಂಮೀ/ಇ-126/ಮೀಇಯೋ/2022, ದಿನಾಂಕ: 11-04-2022.
2) ಆದೇಶ ಸಂಖ್ಯೆ: ಪಸಂಮೀ/ಇ-127/ಮೀಇಯೋ/ 2022, ದಿನಾಂಕ: 11-04-2022.
3) ಆದೇಶ ಸಂಖ್ಯೆ: ಪಸಂಮೀ/ಇ-136/ಮೀಇಯೋ/2022 ದಿನಾಂಕ: 25-05-2022 ಮತ್ತು 20-07-2022.
4) ಆದೇಶ ಸಂಖ್ಯೆ: ಪಸಂಮೀ/ಇ-220/ಮೀಇಯೋ/2022 ದಿನಾಂಕ: 03-10-2022 ಮತ್ತು 10-10-2022.
5) ಪತ್ರ ಸಂಖ್ಯೆ: DOF-ADMNMBGT/21/2022, ದಿನಾಂಕ: 17-12-2022.
6) ಆದೇಶ ಸಂಖ್ಯೆ: ಪಸಂಮೀ/ಇ-293/ಮೀಇಯೋ/2022 ದಿನಾಂಕ: 02-01-2023.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವಿವಿಧ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಜಿಲ್ಲಾ ಪಂಚಾಯತ್ ಯೋಜನೆಗಳನ್ನು ಸಂಬಂಧಪಟ್ಟ ಹುದ್ದೆಗಳೊಂದಿಗೆ 2022-23ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯ ವಲಯ ದಡಿ ರೂ.4210.68 ಲಕ್ಷಗಳನ್ನು ಪ್ರಥಮ ಕಂತಿನ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯವಲಯದಡಿ ರೂ.3,335.61 ಲಕ್ಷ ಹಾಗೂ ರೂ.875.00 ಲಕ್ಷಗಳ ದ್ವಿತೀಯ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ವೇತನಕ್ಕಾಗಿ ರೂ.602.40 ಲಕ್ಷಗಳನ್ನು ಮತ್ತು ರೂ..2126.75 ಲಕ್ಷಗಳನ್ನು ತೃತೀಯ ಕಂತಿನ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, 2022-23ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನ ಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ಶೇ.75ಕ್ಕಿಂತ ಅಧಿಕವಾಗಿ ವೆಚ್ಚವಾಗಿರುವ ಲೆಕ್ಕ ಶೀರ್ಷಿಕೆಗಳಡಿ ನಾಲ್ಕನೇ ಕಂತಿನ ಅನುದಾನವಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನಲ್ಲಿ ಮೀನುಗಾರಿಕೆ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ವೇತನಕ್ಕಾಗಿ ರೂ.724.14 ಲಕ್ಷಗಳನ್ನು ನಾಲ್ಕನೆ ಕಂತಿನ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್ ಡಿ 1 ಟಿಎಫ್ ಪಿ 2022, ದಿನಾಂಕ: 03.01.2023 ರಲ್ಲಿ, 31ನೇ ಡಿಸೆಂಬರ್ 2022 ರ ಅಂತ್ಯಕ್ಕೆ, ಈಗಾಗಲೇ 3 ಕಂತುಗಳಲ್ಲಿ ಬಿಡುಗಡೆ ಮಾಡಲಾದ ಅನುದಾನದಲ್ಲಿ ಶೇ.75ಕ್ಕಿಂತ ಹೆಚ್ಚಾಗಿ ವೆಚ್ಚ ಮಾಡಿದ್ದಲ್ಲಿ, 4ನೇ ಕಂತು ಬಿಡುಗಡೆ ಮಾಡಲು ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಿರುವ ಹಿನ್ನೆಲೆಯಲ್ಲಿ, ಶೇ.75ಕ್ಕಿಂತ ಅಧಿಕ ವೆಚ್ಚವಾಗಿರುವ ವೇತನೇತರ ಲೆಕ್ಕ ಶೀರ್ಷಿಕೆಗಳಡಿ 4ನೇ ಕಂತಿನ ಅನುದಾನ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-293 ಮೀಇಯೋ 2022, ಬೆಂಗಳೂರು ದಿನಾಂಕ: 05-01-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ಕೆಳಕಂಡಂತೆ ವೇತನೇತರ ಲೆಕ್ಕ ಶೀರ್ಷಿಕೆ ಮುಂದೆ ನಮೂದಿಸಿರುವಂತೆ ಒಟ್ಟು ರೂ. 1958.99 ಲಕ್ಷ (ಒಂದು ಸಾವಿರದ ಒಂಭೈನೂರ ಐವತ್ತೆಂಟು ಲಕ್ಷದ ತೊಂಭತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2022-23 ರಲ್ಲಿ ಒದಗಿಸಿದ ಅನುದಾನ | 2022-23ನೇ ಸಾಲಿನಲ್ಲಿ 4ನೇ ಕಂತಿನಲ್ಲಿ ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1) | ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ | 2405-00-101-0-03- | | |
| | ಇತರೆ ಖರ್ಚುಗಳು | 059 | 565.00 | 141.25 |
| 2) | ನೀಲಿಕ್ರಾಂತಿ / ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಕೇಂಪುಯೋ – ಕೇಂದ್ರದ ಪಾಲು | 2405-00-101-0-58 | | |
| | ಸಹಾಯಧನ | 106 | 3031.5 | 757.87 |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | 352.5 | 88.12 |
| | ಗಿರಿಜನ ಉಪ ಯೋಜನೆ | 423 | 141.00 | 35.25 |
| 3) | ನೀಲಿಕ್ರಾಂತಿ/ ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಕೇಂಪುಯೋ – ರಾಜ್ಯದ ಪಾಲು | 2405-00-101-0-59 | | |

| | | | | |
|---|---|---|---|---|
| | ಸಹಾಯಧನ | 106 | 2021.00 | 505.25 |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | 235.00 | 58.75 |
| | ಗಿರಿಜನ ಉಪ ಯೋಜನೆ | 423 | 94.00 | 23.50 |
| 4) | ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆ ಯಾಗದೆ ಇರುವ ಮೊತ್ತ | 2405-00-101-0-66 | | |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | 0.19 | 0.09 (ತೃತೀಯ + ನಾಲ್ಕನೆ) |
| 5) | ಸಾಂಪ್ರದಾಯಿಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು | 2405-00-103-0-17 | | |
| | ಸಹಾಯಧನ | 106 | 168.00 | 42.00 |
| | ಪರಿಶಿಷ್ಠ ಜಾತಿ ಉಪ ಯೋಜನೆ | 422 | 5.00 | 1.25 |
| 6) | ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ | 2405-00-110-0-02- | | |
| | ಸಹಾಯಧನ | 106 | 125.00 | 31.25 |
| 7) | ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ | 2405-00-110-0-03- | | |
| | ಸಹಾಯಧನ | 106 | 400.00 | 100.00 |
| 8) | ಮೀನುಗಾರಿಕೆ ಸಹಕಾರಿ ಸಂಸ್ಥೆಗಳು / ಮೀನುಗಾರರ ಕಲ್ಯಾಣ ಕೇಂ.ಪು.ಯೋ. ಕೇಂದ್ರದ ಪಾಲು | 2405-00-120-0-07 | | |
| | ಸಹಾಯಧನ | 106 | 306.00 | 76.50 |
| 9) | ಮೀನುಗಾರಿಕೆ ಸಹಕಾರಿ ಸಂಸ್ಥೆಗಳು / ಮೀನುಗಾರರ ಕಲ್ಯಾಣ ಕೇಂ.ಪು.ಯೋ. ರಾಜ್ಯದ ಪಾಲು | 2405-00-120-0-08 | | |
| | ಸಹಾಯಧನ | 106 | 306.00 | 76.50 |
| 10) | ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು | 2405-00-195-0-01 | | |
| | ಸಹಾಯಧನ | 106 | 50.00 | 12.50 |
| | | ಒಟ್ಟು | 8300. 19 | 1958.99 |

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-126/ಮೀಇಯೋ/2022, ದಿ: 11-04-2022 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರುವಂತೆ ಅನುಷ್ಠಾನ ಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2022-23ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಅಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ/1/ಟಿಎಫ್ ಪಿ/2022, ದಿನಾಂಕ: 03-01-2023 ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರ ದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5.1.2023.
(ಕೆ.ಎಂ.ಶುಭಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಸಂಬಂಧಪಟ್ಟವರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ), ಮೀನುಗಾರಿಕೆ ಇಲಾಖೆ.
10) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.

**ಪ್ರತಿಯನ್ನು**

1) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.